ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ
ರಾಷ್ಟ್ರೀಯ ಸೇವಾ ಯೋಜನೆ

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2023-24

ಆಯುಕ್ತರವರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ: 08.01.2025

**ಸುತ್ತೋಲೆ**

ವಿಷಯ: "ವಿಕಸಿತ ಭಾರತ ಯುವ ನಾಯಕರ ಸಂವಾದ" ದ ವೀಕ್ಷಣೆಯ ಬಗ್ಗೆ.
ಉಲ್ಲೇಖ: ಕೇಂದ್ರ ಸರ್ಕಾರದ ಮಿಂಚಂಚೆ ದಿನಾಂಕ: 08.01.2025

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖದನ್ವಯ ಕೇಂದ್ರ ಸರ್ಕಾರದ ನಿರ್ದೇಶನದಂತೆ ವಿಕಸಿತ ಭಾರತ ಯುವ ನಾಯಕರ ಸಂವಾದವು ಭಾರತವನ್ನು ಮುಂದಿನ ಹಂತಕ್ಕೆ ಕೊಂಡೊಯ್ಯಲು ಯುವನಾಯಕರಿಗೆ ಚಿಂತನೆ ಮತ್ತು ಚರ್ಚೆಗೆ ಅವಕಾಶ ಒದಗಿಸಿರುತ್ತದೆ. ಇದಲ್ಲದೆ ಯುವಕರಲ್ಲಿ ನಾಯಕತ್ವದ ಗುಣಗಳನ್ನು ಉತ್ತೇಜಿಸಿ ಭಾರತದ ಅಭಿವೃದ್ಧಿಗೆ ಅವರ ಕೊಡುಗೆಯನ್ನು ನೀಡಲು ಸೂಕ್ತ ವೇದಿಕೆಯಾಗಿದೆ. ಇದೇ ಜನವರಿ 10 ರಿಂದ 12 ರ ವರೆಗೆ ಈ ಸಂವಾದವು ನಡೆಯಲ್ಲಿದ್ದು ಜನವರಿ 12 ರಂದು ನವದೆಹಲಿಯ ಭಾರತ ಮಂಡಪಮ್ ನಲ್ಲಿ ದೇಶದ ಪ್ರಧಾನಿಗಳು ಯುವಕರೊಂದಿಗೆ ಸಂವಾದ ನಡೆಸಲಿದ್ದಾರೆ.

ಈ ಸಂವಾದದ ನೇರ ಪ್ರಸಾರವನ್ನು ಜನವರಿ 11 ಮತ್ತು 12 ರಂದು ತಮ್ಮ ಸಂಸ್ಥೆಯ ಎಲ್ಲಾ ವಿದ್ಯಾರ್ಥಿ ಹಾಗೂ ಶಿಕ್ಷಕ ವರ್ಗ ವೀಕ್ಷಿಸಲು ಸೂಕ್ತ ಕ್ರಮವಹಿಸುವಂತೆ ಮತ್ತು ರಾಷ್ಟ್ರೀಯ ಯುವ ದಿನದ ಚಟುವಟಿಕೆಗಳನ್ನು ಜನವರಿ 12 ರಂದು ಮೈಭಾರತ್ ಪೋರ್ಟಲ್ ನಲ್ಲಿ ರಚಿಸಲು ಇಲಾಖಾ ವ್ಯಾಪ್ತಿಗೊಳಪಡುವ ರಾಜ್ಯದ ಎಲ್ಲಾ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ಈ ಯೋಜನೆಗೆ ಸಂಬಂಧಿಸಿದ ವಿವರಕ್ಕಾಗಿ ಉಲ್ಲೇಖಿತ ಪತ್ರವನ್ನು ಲಗತ್ತಿಸಿದೆ.

ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ, ಖಾಸಗಿ ಅನುದಾನಿತ ಮತ್ತು ಖಾಸಗಿ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ -ಸೂಕ್ತ ಕ್ರಮಕ್ಕಾಗಿ
2. ನಿರ್ದೇಶಕರು, ಎನ್ .ಎಸ್.ಎಸ್ ಪ್ರಾದೇಶಿಕ ನಿರ್ದೇಶನಾಲಯ,#57/190 ಆರ್.ವಿ ರಸ್ತೆ, ಬಸವನಗುಡಿ, ಬೆಂಗಳೂರು-04 -ಇವರ ಮಾಹಿತಿಗಾಗಿ
3. ಇ- ಆಡಳಿತ ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ